# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/OBS/ಎಂ.ಬಿ.ಎ./ಸಂ.ನ./2025-26

ಜ್ಞಾನಭಾರತಿ,
ಬೆಂಗಳೂರು-560056
ದಿನಾಂಕ: 05.12.2025

## ಅಧಿಸೂಚನೆ

ವಿಷಯ: 2025-26ನೇ ಶೈಕ್ಷಣಿಕ ಸಾಲಿಗೆ ಎಂ.ಬಿ.ಎ. ಕೋರ್ಸಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಉಲ್ಲೇಖ: ಕುಲಪತಿಯವರ ಅನುಮೋದನೆ ದಿನಾಂಕ : 05.12.2025

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17 ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ, ಬೆಂಗಳೂರು ವಿಶ್ವವಿದ್ಯಾಲಯವು ಆಕ್ಸಬ್ರಿಡ್ಜ್ ಬ್ಯುಸಿನೆಸ್ ಸ್ಕೂಲ್, ನಂ.8 & 9, ಮಹದೇಶ್ವರನಗರ, ವಿಶ್ವನೀಡಂ ಅಂಚೆ, ಹೇರೋಹಳ್ಳಿ ಅಡ್ಡರಸ್ತೆ, ಬೆಂಗಳೂರು-91 ಕಾಲೇಜಿಗೆ ಎಂ.ಬಿ.ಎ. ಕೋರ್ಸಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು, 2025-26ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಆಕ್ಸಬ್ರಿಡ್ಜ್ ಬ್ಯುಸಿನೆಸ್ ಸ್ಕೂಲ್, ನಂ.8 & 9, ಮಹದೇಶ್ವರನಗರ, ವಿಶ್ವನೀಡಂ ಅಂಚೆ, ಹೇರೋಹಳ್ಳಿ ಅಡ್ಡರಸ್ತೆ, ಬೆಂಗಳೂರು-91 | ಎಂ.ಬಿ.ಎ. | 90 (ತೊಂಭತ್ತು) |

**ಷರತ್ತುಗಳು:**

1) ಪ್ರತೀ ಶೈಕ್ಷಣಿಕ ವರ್ಷದ ಎಐಸಿಟಿಇ ಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.
2) ಎಐಸಿಟಿಇ, ನವದೆಹಲಿ, ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ವಿಶ್ವವಿದ್ಯಾಲಯ ವಿಧಿಸಿರುವ/ ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3) ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯವು ಅಂಗೀಕಾರ ನೀಡುವುದಿಲ್ಲ.
4) ಯಾವುದೇ ಕೋರ್ಸಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿ ಇಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5) ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.
6) 2025-26ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು.
7) ವಿದ್ಯಾರ್ಥಿ ಪ್ರಮಾಣದ ನಿಗಧಿಯನ್ನೊಳಗೊಂಡಂತೆ ಸಂಯೋಜನೆಯ ಬಗ್ಗೆ ಸರ್ಕಾರವು ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟುನಿಟ್ಟಾಗಿ ತಪ್ಪದೇ ನಿಗಧಿತ ಅವಧಿಯೊಳಗೆ ಪೂರೈಸತಕ್ಕದ್ದು.

185

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/OBS/ಸಂ.ನ/2025-26

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ:28.11.2025

## ಅಧಿಸೂಚನೆ

ವಿಷಯ : 2025-26ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗ್ಗೆ.
ಉಲ್ಲೇಖ: 1. ವಿಶ್ವವಿದ್ಯಾಲಯದ ಅಧಿಸೂಚನೆ ಸಂಖ್ಯೆ: ಎಸಿಎ-3:ಸಂ.ನ: 2025-26 ದಿನಾಂಕ: 24.10.2025
2. ಕುಲಪತಿಯವರ ಅನುಮೋದನೆ ದಿನಾಂಕ: 28 .11.2025

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ, ಬೆಂಗಳೂರು ವಿಶ್ವವಿದ್ಯಾಲಯವು 2025-26ನೇ ಸಾಲಿಗೆ **ಆಕ್ಸ್ ಬ್ರಿಡ್ಜ್ ಬಿಸಿನೆಸ್ ಸ್ಕೂಲ್, ಬೆಂಗಳೂರು** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು *(Programme)* | ವಿಷಯ *(Subject / Combination )* | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 30 (ಮೂವತ್ತು) |
| ಬಿ.ಕಾಂ. | | 60 (ಅರವತ್ತು) |

**ವಿ.ಸೂ:** 2025-26ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ, ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021 ದಿನಾಂಕ: 12.02.2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ 06 ತಿಂಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Paramters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.
3. ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.
4. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.